**ಕರ್ನಾಟಕ ಸರ್ಕಾರ**

ಸಂಖ್ಯೆ:DTE-ADMI0DEQ2/12/2023

ಆಯುಕ್ತರ ಕಚೇರಿ
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ
ಅರಮನೆ ರಸ್ತೆ, ಬೆಂಗಳೂರು 560001
ದಿನಾಂಕ:07.10.2023

**ಸುತ್ತೋಲೆ**

ವಿಷಯ: ಸರ್ಕಾರದ ಅನುದಾನಿತ ಅಧಿಕಾರಿ / ನೌಕರರ ವಿರುದ್ಧ ಶಿಸ್ತು ಕ್ರಮದ ಪ್ರಕರಣಗಳನ್ನು ನಿರ್ದಿಷ್ಟ ಕಾಲಾವಧಿಯೊಳಗೆ ಮುಕ್ತಾಯಗೊಳಿಸುವ ಬಗ್ಗೆ.

ಉಲ್ಲೇಖ:
1. ಕಾರ್ಯದರ್ಶಿಗಳು ಕರ್ನಾಟಕ ವಿಧಾನ ಪರಿಷತ್ತುರವರ ಕಛೇರಿ ಪತ್ರ ಸಂಖ್ಯೆ:ಸಂಖ್ಯೆ:ಕವಿಪ / ಭಸ / ಬಾಬ /34 / 146+147/ ಉ ಶಿ /2023 ದಿನಾಂಕ:26/07/2023.
2. ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ:ಸಿಆಸುಇ 12 ಸೇಇವಿ2003 ದಿನಾಂಕ:11.09.2003

*-*-*-*-*

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿರುವ ಅನುದಾನಿತ ಪಾಲಿಟೆಕ್ನಿಕ್ ಮತ್ತು ಇಂಜಿನಿಯರಿಂಗ್ ಕಾಲೇಜುಗಳ ಅಧಿಕಾರಿ/ನೌಕರರ ವಿರುದ್ಧ ಶಿಸ್ತು ಕ್ರಮವನ್ನು ಜರುಗಿಸಲು ಕರ್ನಾಟಕ ಶಿಕ್ಷಣ ಕಾಯಿದೆ 1983, ನಿಯಮಗಳ ಪ್ರಕಾರ ಆಡಳಿತ ಮಂಡಳಿಯು ಶಿಸ್ತು ಪ್ರಾಧಿಕಾರವಾಗಿದ್ದು, ಅನುದಾನಿತ ನೌಕರರ ವಿರುದ್ಧ ಶಿಸ್ತುಕ್ರಮ ಆರಂಭಿಸುವುದರಲ್ಲಿ ನಡೆಸುವುದರಲ್ಲಿ ಹಾಗೂ ಅಂತಿಮಗೊಳಿಸುವುದರಲ್ಲಿ ವಿಳಂಬವಾಗುತ್ತಿರುವುದು ಸರ್ಕಾರ/ಇಲಾಖೆಯ ಗಮನಕ್ಕೆ ಬಂದಿರುತ್ತದೆ. ಆದುದರಿಂದ ಉಲ್ಲೇಖ 02ರಲ್ಲಿ ಸೂಚಿಸಿರುವಂತೆ ಶಿಸ್ತುಕ್ರಮದ ವಿವಿಧ ಹಂತಗಳಿಗೆ ನಿರ್ದಿಷ್ಟ ಪಡಿಸಿರುವ ಗರಿಷ್ಠ ಅವಧಿಯೊಳಗೆ ಇಲಾಖಾ ವಿಚಾರಣೆಯನ್ನು ಪೂರ್ಣಗೊಳಿಸಿ ಶಿಸ್ತು ಪ್ರಕರಣಗಳನ್ನು ಇತ್ಯರ್ಥಗೊಳಿಸಲು ಸೂಚಿಸಲಾಗಿದೆ.

ಈ ಕಾಲಮಿತಿಯನ್ನು ಉಲಂಘಿಸಿ ಶಿಸ್ತು ಪ್ರಕರಣಗಳ ಇತ್ಯರ್ಥದ ವಿಳಂಬಕ್ಕೆ ಕಾರಣವಾಗುವ ಅನುದಾನಿತ ಸಂಸ್ಥೆಯ ಅಧಿಕಾರಿಗಳ ವಿರುದ್ಧ ಕರ್ತವ್ಯಲೋಪದ ಆಧಾರದ ಮೇಲೆ ಶಿಸ್ತುಕ್ರಮ ಕೈಗೊಳ್ಳಲಾಗುವುದು.

ಆಯುಕ್ತರು
**ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ**

**ಇವರಿಗೆ,**

1. ರಾಜ್ಯದ ಎಲ್ಲಾ ಅನುದಾನಿತ ಇಂಜಿನಿಯರಿಂಗ್ ಮತ್ತು ಅನುದಾನಿತ ಪಾಲಿಟೆಕ್ನಿಕ್ ಸಂಸ್ಥೆಗಳ ಪ್ರಾಂಶುಪಾಲರು / ಆಡಳಿತ ಮಂಡಳಿಯವರಿಗೆ.
2. ಇ-ಆಡಳಿತ ವಿಭಾಗಕ್ಕೆ-ಸದರಿ ಸುತ್ತೋಲೆಯನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಚುರ ಪಡಿಸಲು.

**ಪ್ರತಿ:**

1. ಆಯುಕ್ತರ ಆಪ್ತ ಶಾಖೆ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
2. ನಿರ್ದೇಶಕರು ಆಪ್ತ ಶಾಖೆ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು
3. ಜಂಟಿ ನಿರ್ದೇಶಕರು(ಆಡಳಿತ), ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
4. ಆಡಳಿತಾಧಿಕಾರಿಗಳು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
5. ಕಛೇರಿ ಪ್ರತಿ